**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 04 ಗ್ರಾಪಂಅ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:17.08.2022.

**ಸುತ್ತೋಲೆ**

**ವಿಷಯ:** ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅರೆನ್ಯಾಯಿಕ ನ್ಯಾಯಾಲಯದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) 48(4) ಮತ್ತು 48(5)ರ ಅಡಿ ಜರುಗುವ ವಿಚಾರಣೆಗೆ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳು ಕಡ್ಡಾಯವಾಗಿ ಹಾಜರಾಗುವ ಬಗ್ಗೆ.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) 48(4) ಮತ್ತು 48(5)ರ ಅಡಿ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು ಮತ್ತು ಸದಸ್ಯರು ಅಧಿಕಾರ ದುರಪಯೋಗ ಮತ್ತು ಹಣ ದುರಪಯೋಗ ಪಡಿಸಿಕೊಂಡ ಪ್ರಕರಣದಡಿ ಮತ್ತು ನಿರಂತರವಾಗಿ ಗ್ರಾಮ ಪಂಚಾಯಿತಿ ಸಭೆಗಳಿಗೆ ಗೈರುಹಾಜರಾಗುವ ಮತ್ತು ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದು ಸದಸ್ಯತ್ವ ಹೊಂದುವ ಪ್ರಕರಣಗಳಲ್ಲಿ ಅಪರ ಮುಖ್ಯ ಕಾರ್ಯದರ್ಶಿಯವರ ಅರೆನ್ಯಾಯಿಕ ನ್ಯಾಯಲಯದಲ್ಲಿ ವಿಚಾರಣೆ ನಡೆಸಿ, ಸೂಕ್ತ ತೀರ್ಮಾನಗಳನ್ನು ಕೈಗೊಳ್ಳಬೇಕಾಗುತ್ತದೆ. ಇಂತಹ ಪ್ರಕರಣಗಳಲ್ಲಿ ವಿಚಾರಣೆಯನ್ನು ಜರುಗಿಸುವಾಗ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಪರವಾಗಿ ಹಿರಿಯ ಅಧಿಕಾರಿಗಳು ವಿಚಾರಣೆ ಕಾಲಕ್ಕೆ ಹಾಜರಾಗದಿರುವುದನ್ನು ಗಮನಿಸಲಾಗಿದೆ ಮತ್ತು ಇದನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಅದರಂತೆ, ಈ ಕೆಳಗಿನ ಕ್ರಮವನ್ನು ಅನುಸರಿಸಲು ಈ ಮೂಲಕ ಸೂಚಿಸಲಾಗಿದೆ.

1. ಪ್ರಕರಣದ ವಿಚಾರಣೆಗೆ ಸಂಬಂಧಿಸಿದಂತೆ ಹೊರಡಿಸಲಾಗುವ ನೋಟೀಸನ್ನು ಸಂಬಂಧಪಟ್ಟವರಿಗೆ ಜಾರಿಗೊಳಿಸಿ ಅದರ ಸ್ವೀಕೃತಿಯನ್ನು ದಿನಾಂಕದೊಂದಿಗೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಪಡೆದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಇವರ ಮುಖಾಂತರ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.
2. ಜಿಲ್ಲಾ ಪಂಚಾಯತಿಯಲ್ಲಿನ ಸಂಬಂಧಪಟ್ಟ ಉಪಕಾರ್ಯದರ್ಶಿ ಪ್ರಕರಣಕ್ಕೆ ಸಂಬಂಧಿಸಿದಂತೆ ಪೂರಕ ಮಾಹಿತಿ / ದಾಖಲೆ ಹಾಗೂ ಅದರ ಸಂಕ್ಷಿಪ್ತ ಟಿಪ್ಪಣಿಯೊಂದಿಗೆ ಕಡ್ಡಾಯವಾಗಿ ಹಾಜರಾಗತಕ್ಕದ್ದು.
3. ತಾಲ್ಲೂಕು ಪಂಚಾಯತಿಯಿಂದ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಾರ್ಯನಿರ್ವಾಹಕ ಅಧಿಕಾರಿಯು ಪೂರ್ಣ ಮಾಹಿತಿಯೊಂದಿಗೆ ಹಾಗೂ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರೊಂದಿಗೆ ವಿಚಾರಣೆ ಕಾಲಕ್ಕೆ ಹಾಜರಾಗತಕ್ಕದ್ದು.

4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಅರೆನ್ಯಾಯಿಕ ವಿಚಾರಣೆಯ ಸಮಯದಲ್ಲಿ ನೀಡುವ ನಿರ್ದೇಶನಗಳನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ವೈಯಕ್ತಿಕ ಗಮನ ಹರಿಸಿ ಅನುಷ್ಠಾನಗೊಳಿಸಲು ಕ್ರಮಕೈಗೊಂಡು ಮುಂದಿನ ವಿಚಾರಣೆ ಸಮಯದೊಳಗೆ ಮಾಹಿತಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

5. ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಇವರು ಪ್ರಕರಣ ಸಂಬಂಧಿಸಿದಂತೆ ಎಲ್ಲಾ ಮಾಹಿತಿಯೊಂದಿಗೆ ಉಪ ಕಾರ್ಯದರ್ಶಿಗಳು ಹಾಜರಾಗಲು ನಿರ್ದೇಶನ ನೀಡತಕ್ಕದ್ದು.

**(ಉಮಾ ಮಹದೇವನ್)**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1) ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಕೆಂಪೇಗೌಡ ರಸ್ತೆ, ಗಾಂಧಿನಗರ, ಬೆಂಗಳೂರು.
2) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
3) ಎಲ್ಲಾ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳು,
4) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
5) ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿರವರು.
2) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.